## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಎಂ.ಟಿ.ಬೋರಯ್ಯ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಇವರ ವಿರುದ್ಧ ಇಲಾಖಾ ವಿಚಾರಣೆ-ಪ್ರಕರಣವನ್ನು ಉಪ ಲೋಕಾಯುಕ್ತರವರಿಗೆ ವಹಿಸುವ ಕುರಿತು.

ಓದಲಾಗಿದೆ:- 1. ಮಾನ್ಯ ಉಪ ಲೋಕಾಯುಕ್ತ ಇವರು ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(3)ರಡಿ ಸಲ್ಲಿಸಿರುವ ವರದಿ:07.09.2015

2. ಅಪರ ನಿಬಂಧಕರು, ವಿಚಾರಣೆಗಳು-07, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಅ.ಸ. ಪತ್ರ ಸಂಖ್ಯೆ :ಕಂಪ್ಲೇಟ್ /ಉಪಲೋಕ್ / ಎಂವೈಎಸ್-851/2007/ಎಆರ್ಇ-7,ದಿನಾಂಕ:08-09-2015

* * * * * * *

**ಪ್ರಸ್ತಾವನೆ:-**

ಅಪರ ನಿಬಂಧಕರು, ವಿಚಾರಣೆ-07, ಕರ್ನಾಟಕ ಲೋಕಾಯುಕ್ತ ಕಛೇರಿ, ಬೆಂಗಳೂರು ಇವರು ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ಪತ್ರದ ಜೊತೆಗೆ ಮಾನ್ಯ ಉಪ ಲೋಕಾಯುಕ್ತ ಇವರ ಕರ್ನಾಟಕ ಲೋಕಾಯುಕ್ತ ಕಾಯ್ದೆ ಕಲಂ 12(3) ರ ವರದಿ ಹಾಗೂ ಇತರೆ ದಾಖಲೆಗಳನ್ನು ಸರ್ಕಾರಕ್ಕೆ ಕಳುಹಿಸಿ ಮಾನ್ಯ ಉಪ ಲೋಕಾಯುಕ್ತರು ಇವರ ವರದಿಯಲ್ಲಿನ ಶಿಫಾರಸ್ಸಿನಂತೆ ಕ್ರಮ ಕೈಗೊಂಡು ಕ್ರಮದ ಬಗ್ಗೆ ಸರ್ಕಾರದ ನಿರ್ಣಯವನ್ನು ತಿಳಿಸುವಂತೆ ಕೋರಿರುತ್ತಾರೆ.

ಮಾನ್ಯ ಉಪ ಲೋಕಾಯುಕ್ತರವರ ವರದಿ ಹಾಗೂ ಇತರೆ ದಾಖಲೆಗಳನ್ನು ಪರಿಶೀಲಿಸಲಾಗಿದೆ. ದಿನಾಂಕ: 7.12.2007 ರಂದು ಪ್ರಜಾವಾಣಿ ದಿನಪತ್ರಿಕೆಯಲ್ಲಿ ಚಾಮರಾಜನಗರ ತಾಲ್ಲೂಕು ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಪ್ರತಿ ಗ್ರಾಮ ಪಂಚಾಯತ್‌ನ ಮುಂದೆ, ಸರ್ಕಾರದ ಯೋಜನೆಗಳನ್ನು ಜನಸಾಮಾನ್ಯರಿಗೆ ತಿಳಿಯಪಡಿಸುವ ಸಲುವಾಗಿ ಪ್ರಚಾರ ಫಲಕಗಳನ್ನು ಹಾಕಲಾಗಿದ್ದು, ಈ ರೀತಿ ಅಳವಡಿಸಲಾದ ಫಲಕಕ್ಕೆ ಮಾರುಕಟ್ಟೆ ದರಕ್ಕಿಂತ ಹೆಚ್ಚು ದರವನ್ನು ನೀಡಿ ಖರೀದಿ ಮಾಡಿ ಕರ್ತವ್ಯ ಲೋಪ ಎಸಗಿರುತ್ತಾರೆಂಬ ಸುದ್ದಿಯನ್ನು ಆಧರಿಸಿ ಶ್ರೀ ಎಂ.ಟಿ.ಬೋರಯ್ಯ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಚಾಮರಾಜನಗರ ರವರ ವಿರುದ್ಧ ಸ್ವಯಂಪ್ರೇರಣೆಯಿಂದ ದೂರನ್ನು ದಾಖಲಿಸಿಕೊಂಡು ಲೋಕಾಯುಕ್ತ ಕಚೇರಿಯು ತನಿಖೆಯನ್ನು ನಡೆಸಿ ಸಲ್ಲಿಸಿದ ವರದಿಯ ಅನುಸಾರ ಈ ಕೆಳಕಂಡಂತೆ ಅಂಶಗಳು ಕಂಡು ಬಂದಿರುತ್ತದೆ:-

-----2

(1) ಚಾಮರಾಜನಗರ ತಾಲ್ಲೂಕು ಪಂಚಾಯತಿ ವ್ಯಾಪ್ತಿಯಲ್ಲಿ ಅಳವಡಿಸಿರುವ ಪ್ರಚಾರ ಫಲಕಗಳಿಗೆ ಮಾರುಕಟ್ಟೆ ದರಕ್ಕಿಂತ ಹೆಚ್ಚುವರಿ ದರವನ್ನು ನಿಗದಿಪಡಿಸಿದ್ದು, ಸದರಿ ಹೆಚ್ಚುವರಿ ಮೊತ್ತವನ್ನು ಸರ್ಕಾರಕ್ಕೆ ಮರು ಪಾವತಿಸುವ ಬಗ್ಗೆ ಯಾವುದೇ ಮಾಹಿತಿ ಸಲ್ಲಿಸದೇ ಇರುವುದು ;

(2) ತನಿಖೆಗೆ ಅಗತ್ಯವಿರುವ ದಾಖಲೆಗಳನ್ನು ನಿಗದಿತ ಅವಧಿಯೊಳಗೆ ಸಲ್ಲಿಸದೇ ಇರುವುದು.

(3) ಮಾನ್ಯ ಉಪಲೋಕಾಯುಕ್ತರವರ ಮುಂದೆ ಹಾಜರಾಗಿ ಮುಚ್ಚಳಿಕೆ ನೀಡಿದ ಪ್ರಕಾರ ಸಿಬ್ಬಂದಿಗಳ ನಿವೃತ್ತಿ ವೇತನದಿಂದ ರೂ. 20,600/-ಗಳನ್ನು ವಸೂಲಿ ಮಾಡುವ ಬದಲು ಮಾನ್ಯ ಉಪ ಲೋಕಾಯುಕ್ತ ರವರ ನ್ಯಾಯಾಲಯದಲ್ಲಿ ಪ್ರಕರಣ ಇತ್ಯರ್ಥವಾಗಿದೆ ಎಂದು ಮಹಾಲೇಖಪಾಲರಿಗೆ ತಪ್ಪು ಮಾಹಿತಿ ನೀಡಿರುವುದು.

ಮೇಲೆ ತಿಳಿಸಿರುವಂತೆ ಶ್ರೀ ಎಂ.ಟಿ. ಬೋರಯ್ಯ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಚಾಮರಾಜನಗರ, ಇವರು ಸರ್ಕಾರಕ್ಕೆ ಭರ್ತಿ ಮಾಡಬೇಕಾದ ಹಣವನ್ನು ತುಂಬಲು ಕೈಗೊಳ್ಳಬೇಕಾದ ಕ್ರಮದ ಬಗ್ಗೆ ನಿಗಾವಹಿಸಿ, ಕ್ರಮವಹಿಸದೇ ಕರ್ತವ್ಯಲೋಪ ಎಸಗಿದ್ದು, ಸದರಿಯವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆ ನಡೆಸುವ ಸಲುವಾಗಿ ಪ್ರಕರಣವನ್ನು ತಮಗೆ ವಹಿಸುವಂತೆ ಮಾನ್ಯ ಉಪಲೋಕಾಯುಕ್ತರವರು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ತನಿಖಾ ವರದಿ, ಮಾನ್ಯ ಉಪಲೋಕಾಯುಕ್ತರವರ ಶಿಫಾರಸ್ಸು ಹಾಗೂ ಸಂಬಂಧಪಟ್ಟ ದಾಖಲೆಗಳನ್ನು ಪರಿಶೀಲಿಸಿದೆ. ಶ್ರೀ ಎಂ.ಟಿ. ಬೋರಯ್ಯ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಚಾಮರಾಜನಗರ, ಇವರು ಮೇಲೆ ತಿಳಿಸಿರುವಂತೆ ಕರ್ತವ್ಯಲೋಪ ಎಸಗಿರುವುದು ಕಂಡು ಬಂದಿದ್ದು, ಸದರಿಯವರು ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಸಂಪೂರ್ಣ ನಿಷ್ಠೆ ಪ್ರದರ್ಶಿಸದೇ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(i) (iii) ನ್ನು ಉಲ್ಲಂಘಿಸಿ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ವರ್ತಿಸಿರುವುದರಿಂದ, ಸದರಿಯವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆ ನಡೆಸುವುದು ಅವಶ್ಯವೆಂದು ಕಂಡು ಬಂದಿರುತ್ತದೆ.

.........3

ಆದ್ದರಿಂದ ಶ್ರೀ ಎಂ.ಟಿ.ಬೋರಯ್ಯ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಚಾಮರಾಜನಗರ ಇವರ ವಿರುದ್ಧದ ಆರೋಪದ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಾವಳಿಗಳು 1957ರ ನಿಯಮ 11 ರಂತೆ ನಡೆಸುವ ಸಲುವಾಗಿ ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರಿಗೆ ವಹಿಸಲು ಸರ್ಕಾರವು ನಿರ್ಧರಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 288 ವಿಸೇಟಿ 2015 , ಬೆಂಗಳೂರು ದಿನಾಂಕ:14.12.2015</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಶ್ರೀ ಎಂ.ಟಿ.ಬೋರಯ್ಯ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಚಾಮರಾಜನಗರ ರವರ ವಿರುದ್ಧದ ಆರೋಪದ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ(ವ.ನಿ.ಮೇ) ನಿಯಮಗಳು-1957 ರ ನಿಯಮ 11 ರಂತೆ ನಡೆಸುವ ಸಲುವಾಗಿ ಪ್ರಕರಣವನ್ನು ಸದರಿ ನಿಯಮಗಳ ನಿಯಮ-14(ಎ) ರಂತೆ ಮಾನ್ಯ ಉಪ ಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

(ವಿ.ಹನುಮಂತಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**<u>ಇವರಿಗೆ:</u>**

1) ಮಹಾಲೇಖಪಾಲರು, (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2) ಮಾನ್ಯ ಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು
3) ಮಾನ್ಯ ಉಪ ಲೋಕಾಯುಕ್ತ-1, ಕರ್ನಾಟಕ ಲೋಕಾಯುಕ್ತ, ಬೆಂಗಳೂರು
4) ಅಪರ ನಿಬಂಧಕರು, ವಿಚಾರಣೆ-07, ಕರ್ನಾಟಕ ಲೋಕಾಯುಕ್ತ ಬೆಂಗಳೂರು
5) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಾಮರಾಜನಗರ
6) ಸಂಬಂಧಪಟ್ಟ ಅಧಿಕಾರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಾಮರಾಜನಗರ ಇವರ ಮುಖಾಂತರ)
7) ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ(ಪಂ.ರಾಜ್)/ಉಪ ಕಾರ್ಯದರ್ಶಿ, ಗ್ರಾಅಪಂ.ರಾಜ್ ಇಲಾಖೆ, ಇವರ ಆಪ್ತ ಶಾಖೆ.
8) ಮೇಲ್ವಿಚಾರಕರು, ಗಣಕ ಕೋಶ, ಗ್ರಾಅಪಂ.ರಾಜ್ ಇಲಾಖೆ.
9) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.